ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಸಚಿವರು

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 07/03/2020

# ಸಾಮೂಹಿಕ ವಿವಾಹದಿಂದ ಸಿಬ್ಬಂದಿ ವೇತನಕ್ಕೆ ಸಮಸ್ಯೆ ಆಗಲ್ಲ

**ವಿಧಾನಪರಿಷತ್:** ರಾಜ್ಯದ ಎ ದರ್ಜೆಯ 100 ದೇವಸ್ಥಾನಗಳಲ್ಲಿ ಮಾತ್ರ ಸಾಮೂಹಿಕ ವಿವಾಹ ನಡೆಸಲಿದ್ದು ಇದರಿಂದ ಸಿಬ್ಬಂದಿ ವೇತನಕ್ಕೆ ಸಮಸ್ಯೆ ಆಗುವುದಿಲ್ಲ ಎಂದು ಮುಜರಾಯಿ ಸಚಿವ ಕೋಟ ಶ್ರೀನಿವಾಸ ಪೂಜಾರಿ ಸ್ಪಷ್ಟಪಡಿಸಿದರು.

ಜೆಡಿಎಸ್ ಸದಸ್ಯ ಟಿ.ಎ.ಶರವಣ ಅವರು ರಾಜ್ಯಪಾಲರ ಭಾಷಣದ ಮೇಲಿನ ವಂದನಾ ನಿರ್ಣಯದ ಕುರಿತು ಮಾತನಾಡುವ ವೇಳೆ 'ಭಕ್ತರು ಹುಂಡಿಗೆ ಹಾಕುವ ಹಣವನ್ನು ದೇವಸ್ಥಾನಗಳ ಜೀರ್ಣೋದ್ಧಾರ ಮಾಡಬೇಕೇ ವಿನಃ ಸಾಮೂಹಿಕ ವಿವಾಹಕ್ಕೆ ಉಪಯೋಗಿಸುವುದು ಸರಿಯಲ್ಲ, ಸರ್ಕಾರ ಸ್ವಂತ ಖರ್ಚಿನಿಂದ ಇದನ್ನು ಮಾಡಬೇಕು' ಎಂದರು.

ಇದಕ್ಕೆ ಸಭಾ ನಾಯಕರೂ ಆದ ಸಚಿವ ಕೋಟ ಶ್ರೀನಿವಾಸ ಪೂಜಾರಿ ಪ್ರತಿಕ್ರಿಯಿಸಿ, ಶೇ.35ಕ್ಕಿಂತ ಕಡಿಮೆ ಆದಾಯ ಮಿತಿ ಇರುವ ದೇವಸ್ಥಾನದ ಹಣವನ್ನು ಬಳಕೆ ಮಾಡಿಕೊಳ್ಳದೆ ಮುಜರಾಯಿ ಇಲಾಖೆಯಿಂದಲೇ ಆರ್ಥಿಕ ನೆರವು ನೀಡಿ ಉಚಿತ ಸಾಮೂಹಿಕ ವಿವಾಹ ನಡೆಸಲಾಗುವುದು. ಆರ್ಥಿಕವಾಗಿ ಬಲವಾಗಿರುವ ನೂರು ಎ ದರ್ಜೆ ದೇವಸ್ಥಾನಗಳ ಪೈಕಿ 3 ದೇಗುಲ ಹೊರತುಪಡಿಸಿ 97 ದೇಗುಲಗಳಲ್ಲಿ ಸಾಮೂಹಿಕ ವಿವಾಹ ಮಾಡಲಾಗುತ್ತದೆ ಎಂದರು.



ಸಚಿವ ಕೋಟ ಶ್ರೀನಿವಾಸ ಪೂಜಾರಿ ಮಾತನಾಡಿದರು.

ಕುಕ್ಕೆ ಸುಬ್ರಹ್ಮಣ್ಯ ದೇವಸ್ಥಾನದಿಂದ 100 ಕೋಟಿ, ಕೊಲ್ಲೂರು ಮೂಕಾಂಬಿಕೆಯಿಂದ 60-80 ಕೋಟಿ, ಕಟೀಲು ದುರ್ಗಾ ಪರಮೇಶ್ವರಿ ದೇವಸ್ಥಾನದಿಂದ 35ರಿಂದ 40 ಕೋಟಿ, ಚಾಮುಂಡೇಶ್ವರಿ ದೇವಸ್ಥಾನದಿಂದ 40- 50 ಕೋಟಿ ಆದಾಯ ಬರುತ್ತದೆ. 190 ದೇವಸ್ಥಾನಗಳ ಪೈಕಿ 100 ಎ ದರ್ಜೆಯ ದೇಗುಲಗಳಲ್ಲಿರುವ ಹಣವನ್ನು ಮಾತ್ರ ಬಳಕೆ ಮಾಡುತ್ತಿದ್ದೇವೆ. ಆರ್ಥಿಕವಾಗಿ ಶಕ್ತಿ ಕಡಿಮೆ ಇರುವ ದೇವಸ್ಥಾನಗಳ ಹುಂಡಿ ಹಣವನ್ನು ಅಲ್ಲಿನ ಸಿಬ್ಬಂದಿ ವೇತನಕ್ಕೆ ಉಪಯೋಗಿಸಲಿದ್ದೇವೆಂದರು.

ಉಚಿತ ಸಾಮೂಹಿಕ ವಿವಾಹಕ್ಕೆ ಹಣಕಾಸಿನ ಕೊರತೆ ಇಲ್ಲ, ನಮ್ಮ ಇಲಾಖೆ ಇದೆಲ್ಲವನ್ನೂ ಭರಿಸಲು ಶಕ್ತವಾಗಿದೆ. ಈವರೆಗೂ ಸಾಮೂಹಿಕ ಮದುವೆಯಾಗಲು 2000ಕ್ಕೂ ಹೆಚ್ಚು ಅರ್ಜಿ ಬಂದಿವೆ. ವಿವಾಹವಾಗುವವರು ಸ್ಥಳದಲ್ಲಿಯೇ ನೋಂದಣಿ ಮಾಡಿಸಿಕೊಳ್ಳುವಂತೆ ವ್ಯವಸ್ಥೆ ಕಲ್ಪಿಸಲಾಗಿದೆ. ಇದೊಂದು ಪಾರದರ್ಶಕ ಕಾರ್ಯಕ್ರಮವಾಗಿದ್ದು, ಪಕ್ಷಬೇಧ ಮರೆತು ಎಲ್ಲರೂ ಸಹಕಾರ ನೀಡುತ್ತಿದ್ದಾರೆಂದರು.

ಈ ವೇಳೆ ಮಧ್ಯಪ್ರವೇಶಿಸಿದ ಕಾಂಗ್ರೆಸ್ ಸದಸ್ಯೆ ಜಯಮಾಲಾ, ಇದೊಂದು ಅತ್ಯುತ್ತಮ ಕಾರ್ಯಕ್ರಮ. ತಾವೆಲ್ಲರೂ ಪಕ್ಷಬೇಧ ಮರೆತು ಬೆಂಬಲಿಸಬೇಕು. ವಿವಾಹವಾಗುವ ನೂತನ ವಧು ವರರಿಗೆ ಸ್ಥಳದಲ್ಲಿಯೇ ನೋಂದಣಿ ಮಾಡಿಸಿಕೊಳ್ಳಲು ಅನುಕೂಲ ಕಲ್ಪಿಸಬೇಕು ಎಂದು ಹೇಳಿದರು.